ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ರಾಜ್ಯದಲ್ಲಿ ಗಣಿಗಾರಿಕೆ ಪರವಾನಗಿ ಕುರಿತು

ಡಾ|| ಜಯಮಾಲ ರಾಮಚಂದ್ರ(ನಾಮನಿರ್ದೇಶನ ಹೊಂದಿದವರು):-

1528 (1857) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 03 ವರ್ಷಗಳಲ್ಲಿ ರಾಜ್ಯದಲ್ಲಿ ಗಣಿಗಾರಿಕೆ ಪರವಾನಿಗೆ ಪಡೆಯಲು ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಎಷ್ಟು ಅರ್ಜಿಗಳು ವಿಲೇವಾರಿಯಾಗಿದೆ; ಎಷ್ಟು ಅರ್ಜಿಗಳನ್ನು ಇನ್ನೂ ಬಾಕಿ ಇಡಲಾಗಿದೆ; ಇದಕ್ಕೆ ಕಾರಣವೇನು; (ಸಂಪೂರ್ಣ ವಿವರ ನೀಡುವುದು)

(ಆ) ಹೊಸದಾಗಿ ಗಣಿಗಾರಿಕೆ ಮಾಡಲು ಇರುವ ಮಾನದಂಡಗಳೇನು; ಗಣಿಗಾರಿಕೆ ನಡೆಸಲು ಪರವಾನಿಗೆದಾರರು ಹೊಂದಬೇಕಾದ ಅರ್ಹತೆಗಳೇನು;

(ಇ) ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ನಡೆಸುತ್ತಿರುವುದಕ್ಕೆ ಸಂಬಂಧಿಸಿದಂತೆ ದಾಖಲಾದ ದೂರುಗಳೆಷ್ಟು; ಇದರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?